Form No.4 (Civil)
Deposition
Sheets
(R.P.No.57)

## ವಿಶೇಷ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,

## ಯಾದಗಿರಿ

## ಸ್ಪೆಷಲ್.ಸಿ. ಸಂಖ್ಯೆ: 92/2020

ಪ್ರಾ.ಸಾ. 4 ಚಾ.ಸಾ. 3

| | | |
|---|---|---|
| ಹೆಸರು | : | ಮಹಾದೇವಪ್ಪ |
| ತಂದೆಯ ಹೆಸರು | : | ಮಲ್ಲಪ್ಪ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ | : | ಮೈಲಾಪೂರ |

ಪ್ರಮಾಣ ವಚನ ಭೋಧಿಸಿದ ದಿನಾಂಕ: 08-04-2026

ಮುಖ್ಯ ವಿಚಾರಣೆ ವಿಶೇಷ ಸರಕಾರಿ ಅಭಿಯೋಜಕರಿಂದ

ನನಗೆ ಚಾಸಾ-1, 2 ಮತ್ತು 4 ಇವರ ಪರಿಚಯ ಇದೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಈಗ ನನಗೆ ತೋರಿಸಿದ ದಾಖಲೆಯಲ್ಲಿ ನನ್ನ ಹೆಬ್ಬೆಟ್ಟು ಇದ್ದು ಪೊಲೀಸರ ಕೋರಿಕೆ ಮೇರೆಗೆ ಸದರಿ ಹೆಬ್ಬೆಟ್ಟಿನ ಗುರುತು ಮಾಡಿರುತ್ತೇನೆ. ಆ ಪಂಚನಾಮೆಯನ್ನು ಈಗಾಗಲೆ ನಿ.ಪಿ.2 ಎಂದು ಗುರುತಿಸಲಾಗಿದೆ. ಆ ಕಾಲಕ್ಕೆ ತೆಗೆದ ನಕ್ಷೆಯನ್ನು ಈಗಾಗಲೆ ನಿ.ಪಿ.4 ಗುರುತಿಸಿಲಾಗಿದೆ. ಸಾಕ್ಷಿಗೆ ನಿಪಿ 3 ಭಾವಚಿತ್ರವನ್ನು ತೋರಿಸುತ್ತಿದ್ದು ಅದರಲ್ಲಿ ನಾನು ಕಾಣುತ್ತಿದ್ದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ತೆಗೆದಿದ್ದಾರೆ ಎಂದು ಗೊತ್ತಿಲ್ಲ ಎಂದು ಹೇಳುತ್ತಾರೆ.

2. ಈಗ ನನಗೆ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದ್ದು ಪೊಲೀಸರ ಕೋರಿಕೆ ಮೇರೆಗೆ ಸದರಿ ಹೆಬ್ಬೆಟ್ಟಿನ ಗುರುತು ಮಾಡಿರುತ್ತೇನೆ. ಆ ಪಂಚನಾಮೆಯನ್ನು ಈಗಾಗಲೆ ನಿ.ಪಿ.5 ಎಂದು ಗುರುತಿಸಲಾಗಿದೆ . ಆ ಕಾಲಕ್ಕೆ ತೆಗೆದ ನಿಪಿ 6 ಭಾವಚಿತ್ರವನ್ನು ತೋರಿಸುತ್ತಿದ್ದು ಅದರಲ್ಲಿ ನಾನು ಕಾಣುತ್ತಿದ್ದು ಸದರಿ ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ತೆಗೆದಿದ್ದಾರೆ ಎಂದು ಗೊತ್ತಿಲ್ಲ ಎಂದು ಹೇಳುತ್ತಾರೆ. ನಿ.ಪಿ.2 ಮತ್ತು 4, 5 ರಲ್ಲಿ ಬರೆದ ವಿಷಯ ಗೊತ್ತಿರುವುದಿಲ್ಲ.

( ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ವಿಶೇಷ ಸರಕಾರಿ ಅಭಿಯೋಜಕರು ಭಿನ್ನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಈ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು. )

<u>ಪಾಟೀ ಸವಾಲು ವಿಶೇಷ ಸರಕಾರಿ ಅಭಿಯೋಜಕರಿಂದ</u>

3. ದಿಃ 31-08-2020 ರಂದು ಬೆಳಿಗ್ಗೆ 9-15 ರಿಂದ 10-15 ಗಂಟೆಯ ವರೆಗೆ ನನ್ನನ್ನು ಹಾಗೂ ಚಾಸಾ-2 ರವರನ್ನು ಮೈಲಾಪೂರ ಗ್ರಾಮದ ಮಲ್ಲಪನ ಮನೆಯ ಬಳಿ ಕರೆಯಿಸಿ ಚಾಸಾ-1 ಮಲ್ಲಪ್ಪ ಈತನು ತೋರಿಸಿದ ಮೇರೆಗೆ ಈ ವಿವರವಾಗಿ ಓದಿ ಹೇಳಿದ ನಿ.ಪಿ.2 ರಂತೆ ಗುನ್ಹೆ ಸ್ಥಳದ ಪಂಚನಾಮೆ ಮಾಡಿ ಆ ಕಾಲಕ್ಕೆ ನಿ.ಪಿ.4 ರಂತೆ ನಕ್ಷೆ ಹಾಗೂ ನಿ.ಪಿ.3 ರಂತೆ ಫೋಟೊ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

4. ದಿಃ 31-08-2020 ರಂದು ಬೆಳಿಗ್ಗೆ 10-45 ರಿಂದ 11-15 ಗಂಟೆಯ ವರೆಗೆ ನನ್ನನ್ನು ಹಾಗೂ ಚಾಸಾ-2 ರವರನ್ನು ಮೈಲಾಪೂರ ಗ್ರಾಮದ ಮಲ್ಲಪನ ಮನೆಯ ಬಳಿ ಕರೆಯಿಸಿ ಚಾಸಾ-4 ಮಹಾಲಿಂಗಮ್ಮ ತೋರಿಸಿ ಹಾಜರು ಪಡಿಸಿದ ಕುಪ್ಪಸ ನೊಡಿ ಜಪ್ತಿ ಪಡಿಸಿಕೊಂಡು ಈಗ ವಿವರವಾಗಿ ಓದಿ ಹೇಳಿದ ನಿ.ಪಿ.5 ರಂತೆ ಗುನ್ಹೆ ಸ್ಥಳದ ಪಂಚನಾಮೆ ಮಾಡಿ ಆ ಕಾಲಕ್ಕೆ ನಿ.ಪಿ.6 ರಂತೆ ಫೋಟೊ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

5. ನನಗೆ ಎಲ್ಲಾ ವಿಷಯಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ. ಸಿ ಎಸ್ ಎಮ್ ವಕೀಲರಿಂದ</u>

<u>ಮರು ವಿಚಾರಣೆಃ-ಇಲ್ಲ</u>

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು

ಯಾದಗಿರಿ.